ಜಿಲ್ಲಾಧಿಕಾರಿಗಳ ಹಾಗೂ
ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯ
ಕೊಡಗು ಜಿಲ್ಲೆ, ಮಡಿಕೇರಿ-571201

ಕರ್ನಾಟಕ ಸರ್ಕಾರ

ಕಛೇರಿ: 08272-225500
ನಿವಾಸ: 08272-225700
ಫ್ಯಾಕ್ಸ್: 08272-225900
ಈ-ಮೇಲ್:deo.kodagu@gmail.com
ವೆಬ್ ಸೈಟ್: http://www.kodagu.nic.in

---

ಸಂಖ್ಯೆ:ಪ್ರ.ವಿ./ 4 /2018-19

ದಿನಾಂಕ: 01-09-2018

## ಅಧಿಕೃತ ಜ್ಞಾಪನ

ವಿಷಯ: ಕೊಡಗು ಜಿಲ್ಲೆಯಲ್ಲಿ ಅತಿವೃಷ್ಟಿಯಿಂದ ಉಂಟಾಗಿರುವ ತುರ್ತು ಪರಿಸ್ಥಿತಿ ಹಿನ್ನಲೆಯಲ್ಲಿ ಪರಿಹಾರ ಕೇಂದ್ರಗಳಿಗೆ ನೋಡಲ್ ಅಧಿಕಾರಿಗಳನ್ನು ನೇಮಿಸುವ ವಿಚಾರ.

----------

ಕೊಡಗು ಜಿಲ್ಲೆಯಲ್ಲಿ ಭಾರೀ ಗಾಳಿ ಮಳೆಯಿಂದ ಮಡಿಕೇರಿ ನಗರದ ಸುತ್ತಮುತ್ತ ಹಾಗೂ ಜಿಲ್ಲೆಯ ಹಲವೆಡೆ ಜಲಾವೃತ ಮತ್ತು ಭೂಕುಸಿತದಿಂದ ಮಾನವ/ ಜಾನುವಾರು ಜೀವಹಾನಿ, ಮನೆಹಾನಿ, ರಸ್ತೆಹಾನಿ ಸೇರಿದಂತೆ ಹಲವು ನಷ್ಟಗಳು ಆಗಿರುತ್ತದೆ. ಪ್ರಸ್ತುತ ಪರಿಹಾರ ವಿತರಣೆ / ಮೂಲ ಸೌಕರ್ಯಗಳ ಪುನರ್ ನಿರ್ಮಾಣ ಕಾರ್ಯ ಪ್ರಗತಿಯಲ್ಲಿರುತ್ತದೆ.

ಅತಿವೃಷ್ಟಿಯಿಂದ ಸಂತ್ರಸ್ಥರಾದವರ ತಾತ್ಕಾಲಿಕ ವಸತಿಗಾಗಿ ಈಗಾಗಲೇ ಪರಿಹಾರ ಕೇಂದ್ರಗಳನ್ನು ತೆರೆಯಲಾಗಿದ್ದು, ಈ ಕೇಂದ್ರಗಳಿಗೆ ನೋಡಲ್ ಅಧಿಕಾರಿಗಳನ್ನು ನೇಮಿಸಲಾಗಿರುತ್ತದೆ. ಇವುಗಳ ಪೈಕಿ ಈ **ವಾಲ್ಮೀಕಿ ಭವನ, ಕುಶಾಲನಗರ ಇಲ್ಲಿ ತೆರೆಯಲಾಗಿರುವ ಪರಿಹಾರ ಕೇಂದ್ರಕ್ಕೆ ಹೆಚ್ಚುವರಿಯಾಗಿ ಸಹಾಯಕ ನೋಡಲ್ ಅಧಿಕಾರಿಗಳ ಅನಿವಾರ್ಯತೆ ಇರುವುದರಿಂದ ಶ್ರೀ ಸಂಪತ್ ಕುಮಾರ್, ಅಧೀಕ್ಷಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಚೈನ್ ಗೇಟ್, ಮಡಿಕೇರಿ (ದೂ.ಸಂ: 9663738992)** ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ನೇಮಿಸಿ ಆದೇಶಿಸಿದೆ.

ಜಿಲ್ಲಾಧಿಕಾರಿ,
ಕೊಡಗು ಜಿಲ್ಲೆ, ಮಡಿಕೇರಿ.

ಪ್ರತಿಯನ್ನು:

1. ಸಂಬಂಧಪಟ್ಟ ಅಧಿಕಾರಿಗಳಿಗೆ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮಡಿಕೇರಿ ಇವರ ಮುಖಾಂತರ ಜಾರಿಗಾಗಿ.
2. ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.